# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2255
ಸದಸ್ಯರ ಹೆಸರು : ಶ್ರೀ ಕೆ ಹರೀಶ್ ಕುಮಾರ್
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು
ಉತ್ತರಿಸಬೇಕಾದ ದಿನಾಂಕ : 26-03-2021

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಅಂಗನವಾಡಿಗಳ ಸಂಖ್ಯೆ ಎಷ್ಟು; | ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿ ಒಟ್ಟು 324 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. |
| ಆ) | ಗರಿಷ್ಠ ಹಾಗೂ ಕನಿಷ್ಠ ಮಕ್ಕಳಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು; (ಪ್ರಸ್ತುತ ನೀಡುತ್ತಿರುವ ಪೌಷ್ಠಿಕ ಆಹಾರದ ಕುರಿತಂತೆ ಮಾಹಿತಿ ಒದಗಿಸುವುದು) | 1. ಗರಿಷ್ಠ ಮಕ್ಕಳಿರುವ ಅಂಗನವಾಡಿ ಸಂಖ್ಯೆ: 1 (ಸುಣ್ಣದಕೆರೆ ಅಂಗನವಾಡಿ ಕೇಂದ್ರ).<br>2. ಕನಿಷ್ಠ ಮಕ್ಕಳಿರುವ ಅಂಗನವಾಡಿ ಸಂಖ್ಯೆ: 1 (ಮಾಳಿಗೆ ಮನೆ ಅಂಗನವಾಡಿ ಕೇಂದ್ರ).<br><br>(ಪ್ರಸ್ತುತ ನೀಡುತ್ತಿರುವ ಪೌಷ್ಠಿಕ ಆಹಾರದ ಕುರಿತಂತೆ ಮಾಹಿತಿಯನ್ನು ಅನುಬಂಧ-1 ಮತ್ತು 2 ರಲ್ಲಿ ಒದಗಿಸಲಾಗಿದೆ) |
| ಇ) | ಪ್ರತಿ ಮಗುವಿಗೆ ಪೌಷ್ಠಿಕ ಆಹಾರಕ್ಕೆ ಸಂಬಂಧಿಸಿದಂತೆ ನೀಡಲಾಗುತ್ತಿರುವ ಅನುದಾನ ಎಷ್ಟು? (ಮಾಹಿತಿ ನೀಡುವುದು) | 06 ತಿಂಗಳಿನಿಂದ 06 ವರ್ಷದ ಸಾಮಾನ್ಯ ಮಗುವಿಗೆ ಪ್ರತಿ ದಿನಕ್ಕೆ ರೂ.8/- ಮೌಲ್ಯದ ಮತ್ತು 06 ತಿಂಗಳಿನಿಂದ 06 ವರ್ಷದ ತೀವ್ರ ಅಪೌಷ್ಠಿಕ ಮಗುವಿಗೆ ದಿನಕ್ಕೆ ರೂ.12/- ಮೌಲ್ಯದ ಘಟಕ ವೆಚ್ಚದಡಿ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ. 2020-21ನೇ ಸಾಲಿನಲ್ಲಿ ರೂ.195276.20 ಲಕ್ಷಗಳ ಅನುದಾನವನ್ನು ಪೌಷ್ಠಿಕ ಆಹಾರ ಕಾರ್ಯಕ್ರಮಕ್ಕಾಗಿ ಬಿಡುಗಡೆ ಮಾಡಲಾಗಿದೆ. |
| ಈ) | ಬಾಡಿಗೆ ಕಟ್ಟಡವಿರುವ ಕಡೆಗಳಲ್ಲಿ ಸ್ವಂತ ಕಟ್ಟಡ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಈ ಬಗ್ಗೆ ಹಾಗೂ ತಾಲ್ಲೂಕುವಾರು ವಾರ್ಷಿಕವಾಗಿ ಬೇಕಾಗುವ ಅನುದಾನ ಎಷ್ಟು? | ಹೌದು.<br>ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 2104 ಅಂಗನವಾಡಿ ಕೇಂದ್ರಗಳಿದ್ದು, 1884 ಕೇಂದ್ರಗಳಿಗೆ ಸ್ವಂತ ಕಟ್ಟಡವಿರುತ್ತದೆ. 27 ಅಂಗನವಾಡಿ ಕಟ್ಟಡಗಳು ನಿರ್ಮಾಣ ಹಂತದಲ್ಲಿರುತ್ತವೆ.<br>ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ನಿವೇಶನ ಹಾಗೂ ಅನುದಾನ ಲಭ್ಯತೆಯ ಆಧಾರದ ಮೇರೆಗೆ ಹಂತ-ಹಂತವಾಗಿ ಸ್ವಂತ ಕಟ್ಟಡ ನಿರ್ಮಿಸಲಾಗುವುದು.<br>ತಾಲ್ಲೂಕುವಾರು ವಾರ್ಷಿಕವಾಗಿ ಬೇಕಾಗುವ ಅನುದಾನದ ವಿವರಗಳನ್ನು ಅನುಬಂಧ-3ರಲ್ಲಿ ಒದಗಿಸಲಾಗಿದೆ. |

ಸಂಖ್ಯೆ: ಮಮಇ 126 ಐಸಿಡಿ 2021

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು